ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಪ್ರಧಾನಮಂತ್ರಿ ಫಸಲು ಭೀಮಾ ಯೋಜನೆ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

1048 (1170) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕೇಂದ್ರ ಸರ್ಕಾರವು ಪ್ರಧಾನ ಮಂತ್ರಿ ಫಸಲು ಭೀಮಾ ಯೋಜನೆ ಜಾರಿಗೆ ತಂದಿದ್ದು, ರಾಜ್ಯದಲ್ಲಿ ಇದನ್ನು ಅನುಷ್ಠಾನಗೊಳಿಸಲಾಗಿದಯೇ;

(ಆ) ಈ ಪ್ರಧಾನಮಂತ್ರಿ ಫಸಲು ಭೀಮಾ ಯೋಜನೆಯಡಿಯಲ್ಲಿ ಬೆಳಗಾವಿ ಜಿಲ್ಲೆಯಲ್ಲಿ 2017-18, 2018-19, 2019-2020ರಲ್ಲಿ ಎಷ್ಟು ಜನ ರೈತರು ನೋಂದಾಯಿಸಿಕೊಂಡಿದ್ದಾರೆ;

(ಇ) ಈ ನೋಂದಾಯಿತ ರೈತರು ಪಾವತಿ ಮಾಡಿದ ಕಂತಿನ ಮೊತ್ತವೆಷ್ಟು;

(ಈ) ಬೆಳೆ ಹಾನಿಯಾದ ಸಂದರ್ಭದಲ್ಲಿ ಮೂರು ವರ್ಷಗಳ ಅವಧಿಯಲ್ಲಿ ವಿಮಾ ಸಂಸ್ಥೆಗಳು ಹಾನಿಗೊಳಗಾದ ರೈತರಿಗೆ ನೀಡಿದ ಪರಿಹಾರದ ಮೊತ್ತವೆಷ್ಟು;

(ಉ) ವಿಮೆಯ ಪರಿಹಾರಕ್ಕಾಗಿ ರೈತರು ಮನವಿ ಮಾಡಿದ್ದರೂ ವಿವಿಧ ಕಾರಣಗಳಿಗಾಗಿ ಬಾಕಿ ಉಳಿಸಿಕೊಂಡಿರುವ ಪ್ರಕರಣಗಳೆಷ್ಟು;

(ಊ) ಸಕಾಲಕ್ಕೆ ರೈತರಿಗೆ ಕಾರಣ ನೀಡಿ ಪರಿಹಾರ ಪಾವತಿ ಮಾಡದಿರುವ ವಿಮಾ ಸಂಸ್ಥೆಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?